ಚಿಕ್ಕಮಗಳೂರು ಜಿಲ್ಲೆಯ ಮುತ್ತೋಡಿ ಅರಣ್ಯದಲ್ಲಿ ರೆಸ್ಟಾಟ್ಸ್ ಮತ್ತು ಕಾಟೇಜ್‌ಗಳ ನಿರ್ಮಾಣ.

584 (1334): ಶ್ರೀ ಜ. ಪುಟ್ಟಸ್ವಾಮಿಗೌಡ. (ಹೊಳೆನರಸೀಪುರ)

ಮಾನ್ಯ ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದು ಕೊರತೆಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಚಿಕ್ಕಮಗಳೂರು ಜಿಲ್ಲೆಯ ಮುತ್ತೋಡಿ ಅರಣ್ಯದಲ್ಲಿ ರೆಸ್ಟಾಟ್ಸ್ ಮತ್ತು ಕಾಟೇಜ್‌ಗಳನ್ನು ನಿರ್ಮಿಸಲು ಸರ್ಕಾರವು ಕೇಂದ್ರ ಸರ್ಕಾರಕ್ಕೆ ಯಾವುದಾದರೂ ಪ್ರಸ್ತಾವನೆಯನ್ನು ಕಳುಹಿಸಿದೆಯೆ ?

ಆ. ಹಾಗಿದ್ದಲ್ಲಿ, ಆ ಯೋಜನೆಯ ಅಂದಾಜು ವೆಚ್ಚ;

ಇ. ಕೇಂದ್ರದಿಂದ ಅನುಮೋದನೆ ಪಡೆಯಲು ಈಗಾಗಲೇ ತೆಗೆದುಕೊಂಡ ಕ್ರಮ ?

ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದು ಕೊರತೆಗಳ ರಾಜ್ಯ ಸಚಿವರು):–

ಅ. ಹೌದು.

ಆ. ರೂ. 1.00 ಕೋಟಿ.

ಇ. ಭಾರತ ಸರ್ಕಾರದ ಪ್ರವಾಸೋದ್ಯಮ ಸಚಿವಾಲಯಕ್ಕೆ ಈಕ್ವಿಟಿ ಯೋಜನೆಯಡಿಯಲ್ಲಿ ಆರ್ಥಿಕ ನೆರವನ್ನು ಪಡೆಯಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.

ಗಾಲಿಗಳ ಮೇಲೆ ಅರಮನೆಯ ಯೋಜನೆ ಜಾರಿಗೆ ತರುವ ಬಗ್ಗೆ.

585 (1333): ಶ್ರೀ ಜ. ಪುಟ್ಟಸ್ವಾಮಿ ಗೌಡ (ಹೊಳೆನರಸೀಪುರ)

ಮಾನ್ಯ ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದುಕೊರತೆಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಗಾಲಿಗಳ ಮೇಲೆ ಅರಮನೆಯ ಯೋಜನೆ ಜಾರಿಗೆ ತರುವ ಬಗ್ಗೆ ಪ್ರಸ್ತಾವನೆಯನ್ನು ಸರ್ಕಾರವು ಸಲ್ಲಿಸಿದೆಯೇ ?

ಆ. ಹಾಗಿದ್ದಲ್ಲಿ, ಸರ್ಕಾರವು ಪ್ರಸ್ತಾಪಿಸಿರುವ ಮಾರ್ಗ ಯಾವುದು;

ಇ. ಈ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರವು ಅನುಮೋದಿಸಿದೆಯೇ;

ಈ. ಈ ರೈಲು ಎಂದಿನಿಂದ ಜಾರಿಗೆ ಬರುವುದು ?

ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದು ಕೊರತೆಗಳ ರಾಜ್ಯ ಸಚಿವರು):–

ಅ. ಹೌದು.

ಆ. ಬೆಂಗಳೂರು–ಮೈಸೂರು–ಹಾಸನ (ಹಳೇಬೀಡು–ಬೇಲೂರು)– ಹೊಸಪೇಟೆ (ಹಂಪಿ–ಬಾದಾಮಿ–ಐಹೊಳೆ–ಪಟ್ಟದಕಲ್ಲು)– ಬೆಂಗಳೂರು.

೩. ಇಲ್ಲ.

೪. ಭಾರತ ಸರ್ಕಾರ ಅನುಮೋದಿಸಿದ ನಂತರ.

ಡಾ. ಸರೋಜಿನಿ ಮಹಿಷಿ ಸಮಿತಿ ವರದಿಯ ಕಾರ್ಯಗತ

586 (1332): ಶ್ರೀ ಜಿ. ಪುಟ್ಟಸ್ವಾಮಿಗೌಡ (ಹೊಳೆನರಸೀಪುರ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಟ್ಟು ಉತ್ತರಿಸುವರೇ ?

ಅ. ಡಾ. ಸರೋಜಿನಿ ಮಹಿಷಿ ಸಮಿತಿಯು ಕನ್ನಡಿಗರಿಗೆ ಉದ್ಯೋಗಾವಕಾಶವನ್ನು ಮೀಸಲಿಡುವಂತೆ ಮಾಡಿದ ಶಿಫಾರಸ್ಸನ್ನು ಸರ್ಕಾರವು ಒಪ್ಪಿ ಕಾರ್ಯಗತಗೊಳಿಸಿದೆಯೇ ?

ಆ. ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ?

ಇ.ಕೇಂದ್ರ ಸರ್ಕಾರದ ಸಾರ್ವಜನಿಕ ಉದ್ದಿಮೆಗಳು ಮತ್ತು ಇತರ ಖಾಸಗಿ ಉದ್ಯಮಗಳಲ್ಲಿ ಕನ್ನಡಿಗರಿಗೆ ಆದ್ಯತೆಯ ಮೇರೆಗೆ ಕೆಲಸಗಳನ್ನು ಕೊಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಈ. ಹಾಗಿದ್ದಲ್ಲಿ, ಸರ್ಕಾರವು ಕೈಗಾರಿಕೆಗಳನ್ನು ನಡೆಸಲು ವಿದ್ಯುತ್ ಶಕ್ತಿ ಮತ್ತು ನೀರು ಸರಬರಾಜು ವ್ಯವಸ್ಥೆ ಒದಗಿಸುವ ಸಂದರ್ಭದಲ್ಲಿ ಕನ್ನಡಿಗರನ್ನು ನೇಮಕ ಮಾಡಿಕೊಳ್ಳಬೇಕೆಂಬ ಷರತ್ತುಗಳನ್ನು ಹಾಕಲಾಗುವುದೆ ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು)

ಅ. ಹೌದು

ಆ. ಡಾ. ಸರೋಜಿನಿ ಮಹಿಷಿ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿದ್ದ ವರದಿಗಳಲ್ಲಿರುವ ಶಿಫಾರಸ್ಸುಗಳನ್ನು ಪರಿಶೀಲಿಸಿ ಸರ್ಕಾರವು ಕೆಲವು ಮಾರ್ಪಾಡುಗಳೊಂದಿಗೆ ಆದೇಶ ಸಂಖ್ಯೆ: ಸಿಆಸುಇ 9 ಎಸ್‌ಎಲ್‌ಸಿ 90, ದಿನಾಂಕ 23.11.90ರಲ್ಲಿ ಅಂಗೀಕರಿಸಿ ಹೊರಡಿಸಿದೆ. ಸರ್ಕಾರದ ವಿವಿಧ ಇಲಾಖೆಗಳು ಮತ್ತು ಸಾರ್ವಜನಿಕ ಉದ್ಯಮಗಳು ಈ ಬಗ್ಗೆ ಆದೇಶಗಳನ್ನು ಹೊರಡಿಸಿದೆ. ಮತ್ತು ಅದರ ಅನುಸರಣಾ ಕ್ರಮಗಳನ್ನು ಮುಂದುವರಿಸಲಾಗುತ್ತಿದೆ. ಇದಲ್ಲದೆ ಈ ಶಿಫಾರಸ್ಸುಗಳನ್ನು ಕಾರ್ಯಗತಗೊಳಿಸಲು ಕಾರ್ಯವಿಧಾನ ರೂಪಿಸುವ ಕಾರ್ಯವನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸರ್ಕಾರಿ ಆದೇಶ ಸಂಖ್ಯೆ: ಎಪಿಎಆರ್ 183 ಕೆಒಎಲ್ 92, ದಿನಾಂಕ 11.11.92 ರಂದು ವಹಿಸಿಕೊಡಲಾಗಿದೆ.

ಇ. ಸರ್ಕಾರದಲ್ಲಿ ಲಭ್ಯವಿರುವ ಮಾಹಿತಿಗಳ ಪ್ರಕಾರ ಇಂತಹ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿಲ್ಲ. ಆದರೂ ಡಾ. ಸರೋಜಿನಿ ಮಹಿಷಿ ಸಮಿತಿ ಶಿಫಾರಸ್ಸುಗಳ ಮೇಲೆ ರಾಜ್ಯದಲ್ಲಿ ಸಾರ್ವಜನಿಕ ಮತ್ತು ಖಾಸಗಿ ಉದ್ಯಮಗಳನ್ನು ಸ್ಥಾಪಿಸುವ ಸಮಯದಲ್ಲಿ ಕನ್ನಡಿಗರಿಗೆ ಉದ್ಯೋಗದಲ್ಲಿ ಆದ್ಯತೆ ನೀಡುವ ಷರತ್ತುಗೊಳಪಟ್ಟ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯು ಈಗಾಗಲೆ ಈ ಬಗ್ಗೆ ಸೂಕ್ತ ಸೂಚನೆಗಳನ್ನು ಸುತ್ತೋಲೆ ಸಂಖ್ಯೆ: ಸಿಐ 45ಐಎಪಿ 90,ದಿನಾಂಕ 18.1.91ರಲ್ಲಿ ಹೊರಡಿಸಿದೆ.

ಕನ್ನಡ ಬೆಳವಣಿಗಾಗಿ ಕೈಗೊಂಡಿರುವ ಕ್ರಮಗಳು

588 (1313): ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ)